ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಬೆಂಗಳೂರು ನಗರದಲ್ಲಿ ಖಾಲಿ ಇರುವ ನಿವೇಶನಗಳ ಕುರಿತು

ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿ ಂದ ಚುನಾಯಿತರಾದವರು) :-

1230 (1423) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದಲ್ಲಿ ಖಾಲಿಯಿರುವ ನಿವೇಶನಗಳ ಸಂಖ್ಯೆ ಎಷ್ಟು; ಎಷ್ಟು ವರ್ಷದಿಂದ ಖಾಲಿ ಬಿದ್ದಿವೆ ;

(ಆ) ಸದರಿ ಖಾಲಿ ನಿವೇಶನಗಳಲ್ಲಿ ಸುತ್ತಮುತ್ತಲಿನ ಸಾರ್ವಜನಿಕರು ಕಸ ಮತ್ತು ಕವರ್ ಹಾಗೂ ಇನ್ನಿತರೆ ವಸ್ತುಗಳನ್ನು ಎಸೆದು ಪರಿಸರ ಮಾಲಿನ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಖಾಲಿ ನಿವೇಶನಗಳ ನಿಜವಾದ ಮಾಲೀಕರಿಗೆ ನೋಟಿಸ್ ಜಾರಿ ಮಾಡಿ ಸ್ವಚ್ಚತೆಯಿಂದ ಇಟ್ಟುಕೊಳ್ಳುವಂತೆ ಸರ್ಕಾರದ ವತಿಯಿಂದ ನಿರ್ದೇಶನಗಳನ್ನು ನೀಡಲಾಗಿದೆಯೇ;

(ಈ) ಈ ಸಂಬಂಧ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗಿದೆಯೇ; ಹಾಗಿದ್ದರೂ ಕಸ, ತ್ಯಾಜ್ಯ ಹಾಗೂ ಇನ್ನಿತರೆ ಸಮಸ್ಯೆಗಳನ್ನು ತಡೆಗಟ್ಟಲು ಸರ್ಕಾರದ ವತಿಯಿಂದ ತೆಗೆದುಕೊಂಡ ಕ್ರಮಗಳೇನು;

(ಉ) ಈ ರೀತಿಯ ಪರಿಸರ ಮಾಲಿನ್ಯವನ್ನು ತಡೆಗಟ್ಟಲು ಸರ್ಕಾರದ ವತಿಯಿಂದ ತೆಗೆದುಕೊಂಡ ಕ್ರಮಗಳೇನು ?